**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 1088/2015**

| | | | |
|---|---|---|---|
| ಸಾಕ್ಷಿದಾರರ ಹೆಸರು | | ಶಿವಣ್ಣ ಬಿ.ವೈ | ಪ್ರಾಸಾಃ 6 |
| ತಂದೆಯ ಹೆಸರು | | ಬೋಗೇಗೌಡ | ಚಾಸಾಃ 19 |
| ವಯಸ್ಸು | | 57 ವರ್ಷ | |
| ಕೆಲಸ | | ಪಿ.ಎಸ್.ಐ, ನಂಜನಗೂಡು ನಗರ ಪೊಲೀಸ್ ಠಾಣೆ | ಸಾ ಪ್ರ ಬೋ |
| ವಾಸ | | ನಂಜನಗೂಡು | ದಿಃ 16.07.2024 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ನಾನು ಬದನವಾಳು ಪೋಲಿಸ್ ಠಾಣೆಯಲ್ಲಿ ಸೆಪ್ಟೆಂಬರ್, 2013 ರಿಂದ ಡಿಸೆಂಬರ್, 2016 ರವರೆಗೂ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 30.06.2014 ರಂದು ನಾನು ಠಾಣಾ ಪ್ರಭಾರದಲ್ಲಿ ಇದ್ದಾಗ ಬೆಳಿಗ್ಗೆ 11.30 ಗಂಟೆಗೆ ಚಾಸಾ-1 ರವರು ಕಂಪ್ಯೂಟರಿಕೃತ ಲಿಖಿತ ದೂರನ್ನು ಚಾಸಾ 13 ರವರ ಮುಖೇನ ಕಳುಹಿಸಿಕೊಟ್ಟಿದ್ದು, ಅದನ್ನು ಸ್ವೀಕರಿಸಿ ಠಾಣೆ ಮೊ.ಕ ಸಂಖ್ಯೆ 147/2014 ರಂತೆ ಕಲಂ 143, 147, 148, 341, 342, 323, 353, 504, 506, 452, 355 ಸಹವಾಚಕ ಕಲಂ 149 ಐ.ಪಿ.ಸಿ ರೀತ್ಯ ಪ್ರಕರಣವನ್ನು ದಾಖಲಿಸಿ ಪ್ರ.ವ.ವ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ಮುಂದಿನ ತನಿಖೆಗಾಗಿ ಪ್ರಕರಣದ ಕಡತವನ್ನು ಚಾಸಾ-1 ರವರಿಗೆ ಹಸ್ತಾಂತರಿಸಿರುತ್ತೇನೆ.

ಈಗ ನನಗೆ ತೋರಿಸಿದ ದಾಖಲೆಯು ನಾನು ಸ್ವೀಕರಿಸಿದ ಲಿಖಿತ ದೂರಾಗಿದ್ದು, ಅದರಲ್ಲಿ ನನ್ನ ರುಜು ಇರುತ್ತದೆ. ದೂರನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ರುಜುವನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು.

ಪ್ರಥಮ ವರ್ತಮಾನ ವರದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-7 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು: ಆರೋಪಿ ಪರ ಶ್ರೀ ಕೆ.ಎಸ್.ಕೆ ವಕೀಲರಿಂದ:</u>**

ಆರೋಪಿತರ ವಿರುದ್ದ ಚಾಸಾ 1 ರವರ ಪ್ರಭಾವಕ್ಕೆ ಒಳಗಾಗಿ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಓ**

ಸಹಿ/-

**1ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**